ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:667/2025

ಚಾಸಾ:5 ಪ್ರಾಸಾ:4

ದಿನಾಂಕ: 09.12.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ವಿವೇಕ |
| ತಂದೆಯ ಹೆಸರು | : | ಬಸವ ಮೇಸ್ತ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ಸೆಂಟ್ರಿಂಗ್ |
| ವಾಸ ಸ್ಥಳ | : | ಗಂಗೊಳ್ಳಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>

ಆರೋಪಿತರ ಪರಿಚಯವಿಲ್ಲ. ನಮ್ಮ ಮತ್ತು ಆರೋಪಿತರ ನಡುವೆ ಯಾವುದೇ ಗಲಾಟೆ ನಡೆದಿರುವುದಿಲ್ಲ. ಆರೋಪಿಗಳು ನನ್ನನ್ನು ಅಡ್ಡಗಟ್ಟಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಜೀವ ಬೆದರಿಕೆ ಹಾಕಿಲ್ಲ, ಹಲ್ಲೆ ಮಾಡಿಲ್ಲ. ನಾನು ಹೇಳಿಕೆಯನ್ನು ನೀಡಿರುವುದಿಲ್ಲ. ಸಾಕ್ಷಿಗೆ ನಿಪಿ-2ನ್ನು ತೋರಿಸಿದ್ದು ಅದರಲ್ಲಿ ತನ್ನಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ಸದ್ರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ತಿಳಿದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

<u>ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>

ದಿ: 15-03-2025 ರಂದು ಬೆಳಗ್ಗೆ 11 ಗಂಟೆಗೆ ಚಾಸಾ-1ರವರು ಮನೆಯ ಬಳಿ ರಸ್ತೆಯಲ್ಲಿ ನಿಂತು ಬೇಲಿಯಲ್ಲಿರುವ ಅಕೇಶಿಯಾ ಮರದ ಗೆಲ್ಲು ಕಡಿಯುತ್ತಿರುವಾಗ 1ನೇ ಆರೋಪಿ ಆತನನ್ನು ಹಿಂದಿನಿಂದ ಬಂದು ಅಡ್ಡಗಟ್ಟಿ ತಡೆದು ನಿಲ್ಲಿಸಿ, ತಳ್ಳಿದ್ದಿರಿಂದ ಆತ ಕವಚಿ ಬಿದ್ದಿದ್ದು, ಅವಾಚ್ಯ ಶಬ್ದಗಳಿಂದ ನಿಂಧಿಸಿ ನೀನೇನು ಕರೆಂಟು ಹಾಕಲು ತಕರಾರು ಮಾಡುವುದು, ನಿನಗೆ ಬಹಳ ಸೊಕ್ಕು ಬಂದಿದೆ ಎಂದು ಆತನ ಸೊಂಟಕ್ಕೆ ತುಳಿದಿರುತ್ತಾನೆ ಎಂದರೆ ಸರಿಯಲ್ಲ. ಆ

ಸಮಯದಲ್ಲಿ ಚಾಸಾ-2 ರಿಂದ 4 ರವರು ಬಂದು ಹೊಡೆಯದಂತೆ ತಡೆದಾಗ 1ನೇ ಆರೋಪಿ ಈವತ್ತು ನೀನು ಬಚವ್ ಆದಿ, ನಿನ್ನನ್ನು ಕೊಲ್ಲದೆ ಬಿಡುವುದಿಲ್ಲ ನೋಡು ಎಂದು ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ಅಲ್ಲಿಯೇ ನಿಂತಿದ್ದ 2ನೇ ಆರೋಪಿ ಆತನಿಗೆ ಹೊಡಿ ಬಿಡಬೇಡ ಎಂದು ಅವಾಚ್ಯ ಶಬ್ದಗಳಿಂದ ನಿಂಧಿಸಿ 1ನೇ ಆರೋಪಿಗೆ ಹೇಳಿರುತ್ತಾನೆ ಎಂದರೆ ಸರಿಯಲ್ಲ. ಆಗ ಚಾಸಾ-2 ರಿಂದ 4ರವರು 2ನೇ ಆರೋಪಿತನಲ್ಲಿ ಆತನಿಗೆ ಯಾಕೆ ಹೊಡೆದಿದ್ದು ಎಂದು ವಿಚಾರಿಸಿದಾಗ 2ನೇ ಆರೋಪಿ ಅವಾಚ್ಯ ಶಬ್ದಗಳಿಂದ ಅವರಿಗೂ ಬೈದು ನೀವು ಯಾರು ಕೇಳಲು ಎಂದು ಚಾಸಾ-3 ರವರ ಕೈ ಹಿಡಿದು ಎಳೆದಿರುತ್ತಾನೆ ಎಂದರೆ ಸರಿಯಲ್ಲ. ಆಗ ಚಾಸಾ-2 ರವರು ತಪ್ಪಿಸಲು ಬಂದಾಗ ಅವರನ್ನು ತಳ್ಳಿ ಅಲ್ಲಿಂದ ಹೊರಟು ಹೋಗಿರುತ್ತಾನೆ ಎಂದರೆ ಸರಿಯಲ್ಲ. ನಂತರ ಚಾಸಾ-1 ರವರನ್ನು ಮನೆಗೆ ಕರೆದುಕೊಂಡು ಹೋಗಿ ಅನಂತರ ವಿಶ್ರಾಂತಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ 19-03-2025 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನಾನು ಮತ್ತು ಚಾಸಾ-6 ರವರ ಸಮಕ್ಷಮ ಸಂಜೆ 5-20 ರಿಂದ 6ರವರೆಗೆ ಪಂಚನಾಮೆ ಜರುಗಿಸಿ ಪೋಟೋ ತೆಗೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಘಟನೆ ಬಗ್ಗೆ ನಾನು ಸದ್ರಿ ದಿನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು. ಈಗ ನಾವು ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಆ ಕಾರಣಕ್ಕೆ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**